ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

S1

ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ     ದಿನಾಂಕ : DATE : 22/9/20

### ಮರಾಠಾ ಮೀಸಲಾತಿ: ಸುಪ್ರೀಂಗೆ ಮಹಾರಾಷ್ಟ್ರ ಮೇಲ್ಮನವಿ

22/9/20

ಮುಂಬೈ: ಮಹಾರಾಷ್ಟ್ರದ ಸರ್ಕಾರಿ ಉದ್ಯೋಗಗಳು ಹಾಗೂ ಶಿಕ್ಷಣ ವ್ಯವಸ್ಥೆಯಲ್ಲಿ ಅನುಸರಿಸಲಾಗುತ್ತಿದ್ದ ಮರಾಠಾ ಮೀಸಲಾತಿಯನ್ನು ತಡೆ ಹಿಡಿಯುವಂತೆ ಸುಪ್ರೀಂ ಕೋರ್ಟ್ ನೀಡಿದ್ದ ತೀರ್ಪಿನ ಬಗ್ಗೆ ಮಹಾರಾಷ್ಟ್ರ ಸರ್ಕಾರ ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಿದೆ. ಮೀಸಲಾತಿ ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಗಳ ವಿಚಾರಣೆ ನಡೆಸಿದ್ದ ಸುಪ್ರೀಂ ಕೋರ್ಟ್ ಇದೇ ತಿಂಗಳ ಆರಂಭದಲ್ಲಿ ಮರಾಠಾ ಕೋಟಾಕ್ಕೆ ತಡೆಯಾಜ್ಞೆ ನೀಡಿತ್ತು. ಅಲ್ಲದೆ, ಅರ್ಜಿಗಳ ವಿಚಾರಣೆಯನ್ನು ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಎಸ್.ಎ. ಬೋಬ್ಡೆ ನೇತೃತ್ವದ ವಿಸ್ತೃತಪೀಠಕ್ಕೆ ವರ್ಗಾಯಿಸಿತ್ತು. ಇತ್ತ ಮಹಾರಾಷ್ಟ್ರದಲ್ಲಿ ಮೀಸಲಾತಿ ಪುನರ್ ಜಾರಿಗೆ ಆಗ್ರಹಿಸಿ ಅನೇಕ ಮರಾಠಾ ಪರ ಸಂಘಟನೆಗಳು ಪ್ರತಿಭಟನೆ ನಡೆಸಿದ್ದವು. ಆ ಹಿನ್ನೆಲೆಯಲ್ಲಿ, ಮಹಾರಾಷ್ಟ್ರ ಸರ್ಕಾರ ಸೋಮವಾರ ಮೇಲ್ಮನವಿ ಸಲ್ಲಿಸಿದೆ.